ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301
e-mail: registrar@uni-mysore.ac.in
www.uni-mysore.ac.in

ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ:ಜಿಎಲ್13/137/2022-23

ದಿನಾಂಕ.24.11.2026

ಸುತ್ತೋಲೆ

ವಿಷಯ: ದಿನಾಂಕ:30.11.2026ರಂದು ಮೈಸೂರು ವಿಶ್ವವಿದ್ಯಾನಿಲಯ ಆಯೋಜಿಸಿರುವ
"ಕನ್ನಡ ರಾಜ್ಯೋತ್ಸವದ ಸಮಾರಂಭ"ದಲ್ಲಿ ಭಾಗವಹಿಸುವ ಬಗ್ಗೆ.
ಉಲ್ಲೇಖ: ಮಾನ್ಯ ಕುಲಪತಿಯವರ ಟಿಪ್ಪಣಿ ಸಂಖ್ಯೆ.ಕುಪ/ಇತರೆ/2026-27, ದಿನಾಂಕ.23.11.2026.

-:-

ದಿನಾಂಕ.30-11-2026ರಂದು ಬೆಳಗ್ಗೆ 11.00 ಗಂಟೆಗೆ ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಸಭಾಂಗಣದಲ್ಲಿ **"ಕನ್ನಡ ರಾಜ್ಯೋತ್ಸವ ಸಮಾರಂಭ"**ವನ್ನು ಆಯೋಜಿಸಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಶ್ರೀ ಎಚ್. ಡುಂಡಿರಾಜ್, ಖ್ಯಾತ ಕನ್ನಡ ಹಾಸ್ಯಗಾರ ಕವಿಗಳು, ಬೆಂಗಳೂರು ಇವರು **"ಕನ್ನಡ ಭಾಷೆ-ಸಾಹಿತ್ಯ: ಹನಿ ಹನಿ ಹಾಸ್ಯ"** ಕುರಿತು ವಿಶೇಷ ಉಪನ್ಯಾಸ ನೀಡುವರು. ಸದರಿ ಸಮಾರಂಭದ ಅಧ್ಯಕ್ಷತೆಯನ್ನು ಪ್ರೊ. ಎನ್.ಕೆ. ಲೋಕನಾಥ್, ಸನ್ಮಾನ್ಯ ಕುಲಪತಿಗಳು ಇವರು ವಹಿಸಲಿದ್ದಾರೆ.

ಈ ಹಿನ್ನಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಬಟವಾಡೆ ಅಧಿಕಾರಿಗಳು/ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಾಪಕರುಗಳು/ಅಧ್ಯಾಪಕೇತರ ಉದ್ಯೋಗಿಗಳು/ಸಂಶೋಧಕರು, ಅತಿಥಿ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ದಿನಾಂಕ:30.11.2026ರಂದು ಬೆಳಗ್ಗೆ 10.30 ಗಂಟೆಗೆ ಕ್ರಾಫರ್ಡ್ ಭವನದ ಸಭಾಂಗಣದಲ್ಲಿ ಕಡ್ಡಾಯವಾಗಿ ಭಾಗವಹಿಸಲು ತಿಳಿಸಲಾಗಿದೆ.

<u>ವಿಶೇಷ ಸೂಚನೆ:</u>

* ಮೈಸೂರು ವಿಶ್ವವಿದ್ಯಾನಿಲಯದ ಆಯಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ/ಕಾಲೇಜುಗಳ ಮುಖ್ಯಸ್ಥರು ಈ ಉದ್ದೇಶಕ್ಕಾಗಿ ಒಬ್ಬರು ಉಪನ್ಯಾಸಕರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಿಕೊಂಡು ಸಂಬಂಧಪಟ್ಟ ವಿಭಾಗಗಳ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಭಾಗವಹಿಸುವಂತೆ ಕ್ರಮವಹಿಸತಕ್ಕದ್ದು.
* ನೋಡಲ್ ಅಧಿಕಾರಿಯು ಹಾಜರಾಗುವ ವಿದ್ಯಾರ್ಥಿಗಳಿಂದ ಹಾಜರಾತಿ ಪಡೆದು ಅದರ ಮೂಲ ಪ್ರತಿಯನ್ನು ಕುಲಸಚಿವರ ಕಛೇರಿಗೆ ಅದೇ ದಿನ ದೃಢೀಕರಿಸಿ ಸಲ್ಲಿಸತಕ್ಕದ್ದು.
* ಖಾಯಂ ಉದ್ಯೋಗಿಗಳು ಸರ್ಕಾರ ನಿಗದಿಪಡಿಸಿರುವ ಕೆಂಪು-ಹಳದಿ ಬಣ್ಣ ಒಳಗೊಂಡಿರುವ ಕೊರಳುದಾರದ ಗುರುತಿನ ಚೀಟಿಯನ್ನು ಧರಿಸಿ ಕಾರ್ಯಕ್ರಮಕ್ಕೆ ಹಾಜರಾಗಲು ಸೂಚಿಸಲಾಗಿದೆ ಮತ್ತು ಕಾರ್ಯಕ್ರಮ ಮುಗಿದ ನಂತರ ನಿಮ-ನಿಮ್ಮ ವಿಭಾಗ/ಕಛೇರಿ/ತರಗತಿಗಳಿಗೆ ತೆರಳುವುದು.

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಗೆ,

1. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ ಸಂಯೋಜನಾಧಿಕಾರಿಗಳು ಮತ್ತು ಪ್ರಾಧ್ಯಾಪಕರು.
2. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
3. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
4. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
5. ಸಂಯೋಜಕರು, ಐ.ಸಿ.ಡಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು- ಇವರಿಗೆ ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.

ಈ ವಿಷಯವನ್ನು ನಿಮ್ಮ ವಿಭಾಗದ ಎಲ್ಲಾ ಅಧ್ಯಾಪಕರು/ ಅತಿಥಿ ಉಪನ್ಯಾಸಕರು, ವಿದ್ಯಾರ್ಥಿಗಳು/ಅಧ್ಯಾಪಕೇತರ ಉದ್ಯೋಗಿಗಳು/ಸಂಶೋಧಕರುಗಳ ಗಮನಕ್ಕೆ ತರಬೇಕೆಂದು ತಿಳಿಸಿದೆ. ಎಲ್ಲಾ ಉದ್ಯೋಗಿಗಳು ಕಡ್ಡಾಯವಾಗಿ ಭಾಗವಹಿಸುವಂತೆ ಸೂಕ್ತ ಕ್ರಮ ಕೈಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಲು ಸಹಕರಿಸಲು ಕೋರಿದೆ.

6. ಮಾನ್ಯ ಕುಲಪತಿಯವರ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈವಿವಿ, ಮೈಸೂರು.
7. ಕಛೇರಿ ಪ್ರತಿ.